**ಹೆಚ್ಚುವರಿ ಸಿವಿಲ್ ಹಾಗೂ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಯಾದಗಿರಿ.**

**ಉಪಸ್ಥಿತರುಃ- ಶ್ರೀ ರಾಹುಲ ರಾವ್ ಬಿ.ಎ.ಎಲ್.ಎಲ್.ಬಿ**
**ಹೆಚ್ಚುವರಿ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ಯಾದಗಿರಿ,**

**ಸಿ.ಸಿ. ನಂಃ 1491/2024**

**ಫಿರ್ಯಾಧಿದಾರಃ ಕರ್ನಾಟಕ ಸರ್ಕಾರದ ಪರವಾಗಿ ಸೈದಾಪೂರ ಪೊಲೀಸ್ ಠಾಣೆ**

**// ವಿರುದ್ದ //**

**ಆರೋಪಿ ಃ ಅಯ್ಯಮ್ಮ**

## ದೋಷಾರೋಪಣೆ

ನಾನು **ಶ್ರೀ ರಾಹುಲ ರಾವ್, ಹೆಚ್ಚುವರಿ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ಯಾದಗಿರಿ. ಆರೋಪಿಯಾದ**

| | |
|---|---|
| ಆರೋಪಿ. | ಅಯ್ಯಮ್ಮ ಗಂಡ ಕಿಷ್ಟಪ್ಪ ಕಲಾಲ್,<br>ವಃ 50 ವರ್ಷ,<br>ಉಃ ಕಡೆಚೂರು ಗ್ರಾಮ,<br>ತಾಃ ಮತ್ತು ಜಿಃ ಯಾದಗಿರಿ. |

**ಆದ ನಿನ್ನ ವಿರುದ್ಧ ದೋಷಿಸುವ ದೋಷಾರೋಪಣೆ ಏನೆಂದರೆ,**

ಮೊದಲನೆಯದಾಗಿ ದಿನಾಂಕಃ 04-04-2024 ರಂದು ಮಃ 02-50 ಗಂಟೆ ಸುಮಾರಿಗೆ ಸೈದಾಪೂರ ಪೋಲಿಸ್ ಠಾಣೆಯ ಹದ್ದಿಯಲ್ಲಿ ಬರುವ ಈಳಿಗೇರಾ ಓಣಿಯ ಹತ್ತಿರ ಸಿಸಿ ರಸ್ತೆಯ ಪಕ್ಕೆಕ್ಕೆ ಆರೋಪಿಯಾದ ನೀನು 25 ಲೀಟರನಷ್ಟು ಕಲಬೆರಕೆ ಸೇಂದಿ ಸಂಗ್ರಹಿಸಿ ಇಟ್ಟಿದ್ದು, ಈ ಮೂಲಕ ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತಿರಿ.

2. ಎರಡನೆಯದಾಗಿ ಈ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀನು 25 ಲೀಟರ್ ಸೇಂಧಿ ಮತ್ತು 1250/- ಮತ್ತು 1040/- ರೂಪಾಯಿ ನಗದು ಹಣ, ಸರ್ಕಾರದಿಂದ ಯಾವುದೇ ಪರವಾನಿಗೆ ಪಡೆಯದೇ ಅನಧಿಕೃತವಾಗಿ ಸಾರ್ವಜನಿಕರಿಗೆ ಕುಡಿಯಲು ಮಾರಾಟ ಮಾಡುತ್ತಿದ್ದು, ಈ ಮೂಲಕ ಕರ್ನಾಟಕ ಅಬಕಾರಿ ಕಾಯ್ದೆ ಕಲಂ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತಿರಿ.

3. ಮೂರನೆಯದಾಗಿ ಈ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀನು ಈಳಿಗೇರಾ ಓಣಿಯ ಹತ್ತಿರ ಸಿಸಿ ರಸ್ತೆಯ ಪಕ್ಕಕ್ಕೆ ಸೇಂಧಿ ಮಾರಾಟ ನಿಷೇಧ ಇದ್ದದ್ದು ಗೊತ್ತಿದ್ದರು ಸಹ ವಿಷಕಾರಕ ಸೇಂಧಿಯನ್ನು ಅಕ್ರಮವಾಗಿ ಮಾನವನು ಸೇವಿಸಿದರೆ ಜೀವಕ್ಕೆ ಹಾನಿಯುಂಟಾಗುವ ಸೇಂಧಿ ಮಾರಾಟ ಮಾಡುತ್ತಿದ್ದು, ಈ ಮೂಲಕ ನೀನು ಭಾ. ದಂ. ಸಂ.ಕಲಂ. 284, ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತಿರಿ.

4. ನಾಲ್ಕನೆಯದಾಗಿ ಈ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀನು ಸೇಂಧಿ ಮಾರಾಟ ನಿಷೇಧ ಇದ್ದದ್ದು ಗೊತ್ತಿದ್ದರು ಸಹ ವಿಷಕಾರಕ ಸೇಂಧಿಯನ್ನು ಮಾರಾಟ ಮಾಡಲು ಇಟ್ಟಿದ್ದು, ಈ ಮೂಲಕ ನೀನು ಭಾ. ದಂ. ಸಂ.ಕಲಂ. 273 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತಿರಿ.

(ಮೇಲ್ಕಾಣಿಸಿದ ದೋಷಾರೋಪಣೆಯನ್ನು ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಿ ತೆರೆದ ನ್ಯಾಯಾಲಯದಲ್ಲಿ ದೋಷಾರೋಪಣೆಯನ್ನು ಆರೋಪಿತರಿಗೆ ತಿಳಿಯವ ಭಾಷಯಲ್ಲಿ ಓದಿ ಹೇಳಲಾಯಿತು)

**ದಿನಾಂಕಃ 21-07-2025**
**ಸ್ಥಳಃ ಯಾದಗಿರಿ**

**ಹೆಚ್ಚುವರಿ ಸಿವಿಲ್ ಮತ್ತು ಜೆ ಎಮ್ ಎಫ್ ಸಿ**
**ನ್ಯಾಯಾಧೀಶರು ಯಾದಗಿರಿ.**